ಕರ್ನಾಟಕ ಪರೀಕ್ಷಾ ಪ್ರಾಧಿಕಾರ
Karnataka Examinations Authority

ಸಂಖ್ಯೆ: ಇಡಿ/ಕೆಇಎ/ಆಡಳಿತ/ಪಿಎಸ್ಐ/2023 ದಿನಾಂಕ: 08-01-2024

ಸರ್ಕಾರದ ಆದೇಶ ಸಂಖ್ಯೆ ಒಇ 73 ಪಿಇಐ 2022 ಬೆಂಗಳೂರು 13-11-2023 ರಲ್ಲಿ ಪೊಲೀಸ್ ಸಬ್-ಇನ್ಸ್‌ಪೆಕ್ಟರ್ (ಸಿವಿಲ್) (ಪುರುಷ & ಮಹಿಳಾ) ನೇರ ನೇಮಕಾತಿಯ ಮರು ಪರೀಕ್ಷೆಗೆ ಸಂಬಂಧಿಸಿದಂತೆ ಸಂಕ್ಷಿಪ್ತ ಸೂಚನೆಗಳು ಮತ್ತು **ವೇಳಾಪಟ್ಟಿ ಈ ಕೆಳಗೆ ನೀಡಲಾಗಿದೆ.**

**ಪಿಎಸ್ಐ ಮರು ಪರೀಕ್ಷೆ ವೇಳಾಪಟ್ಟಿ**

| ದಿನಾಂಕ: ದಿನ: | ಸಮಯ : | ವಿಷಯ : | ಅಂಕಗಳು: |
|---|---|---|---|
| 23-01-2024 ಮಂಗಳವಾರ | ಬೆಳಿಗ್ಗೆ 10.30 ರಿಂದ ಮ. 12.00 | Paper-1 | 50 |
| | ಮಧ್ಯಾಹ್ನ 1.00 ರಿಂದ 2.30 | Paper-2 | 150 |

- ಪರೀಕ್ಷಾ ಕೇಂದ್ರದಲ್ಲಿ ಅಭ್ಯರ್ಥಿಗಳು ತಪಾಸಣೆಗೆ ಒಳಪಡುವ ಹಿನ್ನೆಲೆಯಲ್ಲಿ ಬೆಳಿಗ್ಗೆ 8.30 ಕ್ಕೆ ಸರಿಯಾಗಿ ನಿಗದಿತ ಪರೀಕ್ಷಾ ಕೇಂದ್ರದಲ್ಲಿ ಹಾಜರಿರಲು ಸೂಚಿಸಿದೆ.
- ಅಭ್ಯರ್ಥಿಗಳು ಪ್ರವೇಶ ಪತ್ರದ ಜೊತೆಯಲ್ಲಿ ಕಡ್ಡಾಯವಾಗಿ ಗುರುತಿನ ಚೀಟಿಯನ್ನು ಅಂದರೆ, ಡ್ರೈವಿಂಗ್ ಲೈಸೆನ್ಸ್ / ಪಾಸ್‌ಪೋರ್ಟ್ / ಆಧಾರ್ ಕಾರ್ಡ್ / ಪಾನ್ ಕಾರ್ಡ್ / ಮತದಾರರ ಗುರುತಿನ ಚೀಟಿ ಹಾಜರುಪಡಿಸಿದರೆ ಮಾತ್ರ ಅಭ್ಯರ್ಥಿಯನ್ನು ಪರೀಕ್ಷಾ ಕೊಠಡಿಯೊಳಗೆ ಪ್ರವೇಶಿಸಲು ಬಿಡಲಾಗುವುದು.
- ಮೊಬೈಲ್ ಗಳನ್ನು ನಿಷೇಧಿಸಲಾಗಿದ್ದು, ಮೊಬೈಲ್ ನಲ್ಲಿ ಗುರುತಿನ ಚೀಟಿಯನ್ನು ತೋರಿಸುವಂತಿಲ್ಲ ಮತ್ತು ಅಂತಹ ಅಭ್ಯರ್ಥಿಗಳನ್ನು ಪರೀಕ್ಷಾ ಕೇಂದ್ರಕ್ಕೆ ಅನುವು ಮಾಡಿಕೊಡುವುದಿಲ್ಲ.
- ಅಭ್ಯರ್ಥಿಗಳು ಸಾಧ್ಯವಾದಷ್ಟು ಕಾಲರ್‌ಗಳು ಇಲ್ಲದೆ ಇರುವ ಶರಟುಗಳನ್ನು ಹಾಕಿಕೊಳ್ಳುವುದು.
- ಯಾವುದೇ ತೆರನಾದ ಜೀನ್ಸ್ ಪ್ಯಾಂಟ್, ಬೆಲ್ಟ್, ಶೂ ಗಳನ್ನು ಧರಿಸಿ ಪರೀಕ್ಷೆಗೆ ಹಾಜರಾಗಲು ಅನುಮತಿ ಇರುವುದಿಲ್ಲ.
- ಕಿವಿ ಅಥವಾ ಬಾಯಿಯನ್ನು ಮುಚ್ಚಿಕೊಳ್ಳುವಂತಹದನ್ನು ಧರಿಸಿ ಅಥವಾ ಯಾವುದೇ ರೀತಿಯ ಫೇಸ್ ಮಾಸ್ಕ್ ಅನ್ನೂ ಸಹ ಧರಿಸಿ ಪರೀಕ್ಷಾ ಕೊಠಡಿ ಪ್ರವೇಶಿಸುವಂತಿಲ್ಲ.
- ವಾಟರ್ ಬಾಟಲ್ ಗಳನ್ನು ಅನುಮತಿಸುವುದಿಲ್ಲ. ಪ್ರಾಧಿಕಾರದ ವೆಬ್‌ಸೈಟಿನಲ್ಲಿ ಪ್ರಕಟಿಸಲಾಗುವ ವಸ್ತ್ರ ಸಂಹಿತೆಯನ್ನು ಕಡ್ಡಾಯವಾಗಿ ಪಾಲಿಸಬೇಕು.
- ಮೊದಲನೆ ಅವಧಿ ಪರೀಕ್ಷೆ ಮುಗಿದ ನಂತರ ಅಭ್ಯರ್ಥಿಗಳು ಪರೀಕ್ಷಾ ಕೇಂದ್ರದಿಂದ ಹೊರಗೆ ಹೋಗಲು ಅನುಮತಿಸುವುದಿಲ್ಲ.

ಕಾಲ ಕಾಲಕ್ಕೆ ಪ್ರಾಧಿಕಾರದ ವೆಬ್‌ಸೈಟಿನಲ್ಲಿ ಪ್ರಕಟಿಸಲಾಗುವ ಸೂಚನೆಗಳನ್ನು ಅಭ್ಯರ್ಥಿಗಳು ತಪ್ಪದೆ ಪಾಲಿಸತಕ್ಕದ್ದು.

ಕಾರ್ಯನಿರ್ವಾಹಕ ನಿರ್ದೇಶಕರು

**18ನೇ ಅಡ್ಡ ರಸ್ತೆ, ಸಂಪಿಗೆ ರಸ್ತೆ, ಮಲ್ಲೇಶ್ವರಂ, ಬೆಂಗಳೂರು – 560 012**
18th Cross, Sampige Road, Malleshwaram, Bengaluru - 560 012.
Phone: 080 - 23 564 583, 23 460 460, 23 361 786, Fax: 080 - 23 461 576
e-mail : keauthority-ka@nic.in Website : http://kea.kar.nic.in